# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-182 ಪದ್ಮನಾಭನಗರ, ಬೆಂಗಳೂರು

ಸಂ: ಸ.ಅ/ವಾ-182/ಪಿ.ಆರ್/09/2020-21 ದಿನಾಂಕ : 06-03-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :06-03-2021 ರಂದು ವಾರ್ಡ್ ಸಂಖ್ಯೆ-182 ಪದ್ಮನಾಭನಗರದ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

## ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು.

1) ಶ್ರೀ ನರಸಿಂಹಮೂರ್ತಿ ಜಂಟಿ ಆಯುಕ್ತರು ದಾಸರಹಳ್ಳಿ, ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ.

2) ಶ್ರೀ ಶಿವಶಂಕರ್, ಸಹಾಯಕ ಅಭಿಯಂತರರು, ಬೆಸ್ಕಾಂ ಎಸ್-9 ಉಪ ವಿಭಾಗ.

3) ಶ್ರೀ ಶಂಕರ್ ಬಹದ್ದೂರ್ ಸಿಂಗ್, ಕಿರಿಯ ಆರೋಗ್ಯ ಪರಿವೀಕ್ಷಕರು, ಬಿ.ಬಿ.ಎಂ.ಪಿ.

4) ಶ್ರೀ ರಾಜೇಶ್, ಸಹಾಯಕ ಅಭಿಯಂತರರು, ಬೆಸ್ಕಾಂ, ಬಿ.ಬಿ.ಎಂ.ಪಿ.

5) ಶ್ರೀಮತಿ ಐಶ್ವರ್ಯ.ಬಿ.ಎ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ.

6) ಶ್ರೀ ಪ್ರಶಾಂತ್, ಸಹಾಯಕರು, ಬಿ.ಬಿ.ಎಂ.ಪಿ ವಿದ್ಯುತ್ ಉಪ ವಿಭಾಗ (ದಕ್ಷಿಣ).

7) ಶ್ರೀ ಅಪ್ಪಾಜಿಗೌಡ ಸಹಾಯಕ ಆರಕ್ಷಕ ನಿರೀಕ್ಷಕರು, ಬನಶಂಕರಿ ಸಂಚಾರಿ ಠಾಣೆ.

ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕ ಅಭಿಯಂತರರು ಪದ್ಮನಾಭನಗರ ಬಡಾವಣೆ ವಾರ್ಡ್ ಸಂಖ್ಯೆ-182 ರವರಾದ ಶ್ರೀ ರಾಘವೇಂದ್ರ.ಟಿ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರ.ಸಂಖ್ಯೆ | ವಿಷಯ | ಷರಾ |
|---|---|---|
| 1 | ಪದ್ಮನಾಭನಗರ 4ನೇ ಮುಖ್ಯರಸ್ತೆಯಲ್ಲಿ ಹೊಸದಾಗಿ ಒಳಚರಂಡಿ ಕೊಳವೆ ಮಾರ್ಗವನ್ನು ಅಳವಡಿಸುತ್ತಿದ್ದು, ಇದರಿಂದ ಇತರೆ ಮೂಲಭೂತ ಸಂಪರ್ಕಗಳು ಹಾನಿಯಾಗಿರುವುದಾಗಿ ಸಾರ್ವಜನಿಕರು ತಿಳಿಸಿದರು. | ಸ.ಕಾ.ನಿ.ಅ/ ಸ.ಅ (BWSSB) ರವರ ಕ್ರಮಕ್ಕಾಗಿ. |
| 2 | ಕಿತ್ತೂರು ರಾಣಿ ಚೆನ್ನಮ್ಮ ಮೇಲ್‌ಸೇತುವೆ ಬಳಿ ಇರುವ ಖಾಲಿ ಜಾಗದಲ್ಲಿ ಹಳೆಯ ವಾಹನಗಳು ನಿಲುಗಡೆಯಾಗಿದ್ದು, ಇವುಗಳನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದರು. | ಕಾರ್ಯಪಾಲಕ ಅಭಿಯಂತರರು (ಯೋಜನೆ) ದಕ್ಷಿಣ ರವರ ಮುಂದಿನ ಕ್ರಮಕ್ಕಾಗಿ. |
| 3 | ಆದರ್ಶ ಅಪಾರ್ಟ್‌ಮೆಂಟ್ ಬಳಿ ತಡ ರಾತ್ರಿಯಲ್ಲಿ ಕೆಲಸ ಮಾಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಾರ್ವಜನಿಕರು ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-182 ರವರ ಮುಂದಿನ ಕ್ರಮಕ್ಕಾಗಿ. |
| 4 | ಪದ್ಮನಾಭನಗರ ವಾರ್ಡ್ ವ್ಯಾಪ್ತಿಯಲ್ಲಿ ಗೌಡನಪಾಳ್ಯ | ಸ.ಕಾ.ನಿ.ಅ/ ಸ.ಅ ಕೆರೆಗಳು ರವರ ಕ್ರಮಕ್ಕಾಗಿ. |

Scanned by CamScanner

| | | |
|---|---|---|
| | ಕೆರೆಯನ್ನು ಅಭಿವೃದ್ಧಿ ಪಡಿಸಲಾಗುತ್ತಿದ್ದು, ಕೆರೆಯ ಮಧ್ಯಭಾಗದಲ್ಲಿ ದ್ವೀಪವನ್ನು ನಿರ್ಮಿಸಿದಲ್ಲಿ ಪಕ್ಷಿಗಳಿಗೆ ಸಂತಾನೋತ್ಪತಿಗೆ ಅನುಕೂಲವಾಗುತ್ತದೆ ಆದ್ದರಿಂದ ಇದರ ನಿರ್ಮಾಣಕ್ಕೆ ಕ್ರಮಕೈಗೊಳ್ಳುವಂತೆ ಸಾರ್ವಜನಿಕರು ಕೋರಿದರು. | |
| 5 | 2ನೇ ಅಡ್ಡರಸ್ತೆ ಪದ್ಮನಾಭನಗರ ಹಾಗೂ 4ನೇ ಮುಖ್ಯರಸ್ತೆ ಪದ್ಮನಾಭನಗರ ಇಲ್ಲಿ ರಸ್ತೆ ಉಬ್ಬುಗಳನ್ನು ಅಳವಡಿಸಬೇಕಾಗಿ ಸಾರ್ವಜನಿಕರು ಕೋರಿದರು. | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-182 ರವರ ಮುಂದಿನ ಕ್ರಮಕ್ಕಾಗಿ. |
| 6 | ಗೌಡನಪಾಳ್ಯ ಪ್ರದೇಶದಲ್ಲಿ ಪೋಲೀಸ್ ರ ವತಿಯಿಂದ ಹೆಚ್ಚುವರಿ ಬೀಟ್ ಸಿಬ್ಬಂದಿಗಳನ್ನು ನೇಮಿಸುವಂತೆ ಗೌಡನಪಾಳ್ಯ ನಿವಾಸಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಕೋರಿದರು. | ಆರಕ್ಷಕ ನಿರೀಕ್ಷಕರು ಸುಬ್ರಮಣ್ಯಪುರ ರವರು ಈ ವಿಷಯದಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಕೋರಿದೆ. |

ಸಭೆಯಲ್ಲಿ ಇತರೆ ಯಾವುದೇ ವಿಷಯದ ಬಗ್ಗೆ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ಹಾಗೂ ಸಹಾಯಕ ಅಭಿಯಂತರರು

ವಾರ್ಡ್ 182 ರ ನೋಡಲ್ ಅಧಿಕಾರಿ
ಹಾಗೂ ಜಂಟಿ ಆಯುಕ್ತರು, ದಾಸರಹಳ್ಳಿ ವಲಯ.

Scanned by CamScanner